ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನಕ್ಕೆ ಚಾಲನೆ

ಮೌಢ್ಯಮುಕ್ತ ಸಮಾಜ ನಮ್ಮೆಲ್ಲರ ಗುರಿಯಾಗಬೇಕು : ನಟಿ ಉಮಾಶ್ರೀ

ಉದಯಕಾಲ ನ್ಯೂಸ್

ಬ್ಯಾಟರಾಯನಪುರ: ಮೌಢ್ಯಮುಕ್ತ ಸಮಾಜ ನಮ್ಮೆಲ್ಲರ ಗುರಿಯಾಗಬೇಕು ಎಂದು ರಂಗಭೂಮಿ ಕಲಾವಿದೆ, ಚಿತ್ರನಟಿ ಉಮಾಶ್ರೀ ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ದೊಡ್ಡಬಳ್ಳಾಪುರ, ಬೆಂಗಳೂರು ಉತ್ತರ ಶೈಕ್ಷಣಿಕ ಜಿಲ್ಲೆ, ಕರ್ನಾಟಕ ರಾಜ್ಯ ಖಾಸಗಿ ಶಾಲಾ ಕಾಲೇಜು ಗಳ ಒಕ್ಕೂಟ, ಕರ್ನಾಟಕ ರಾಜ್ಯ ಮಾನವ ಬಂಧುತ್ವ ವೇದಿಕೆ ಹಾಗೂ ಕರ್ನಾಟಕ ಸರ್ಕಾರದ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಸ್ಥಳೀಯ ಗ್ರಾಮ ಪಂಚಾಯಿತಿಗಳ ಸಹಯೋಗದೊಂದಿಗೆ ಬಾಗಲೂರಿನ ವಿ.ಜೆ.ಇಂಟರ್ ನ್ಯಾಷನಲ್ ಶಾಲೆಯ ಆವರಣದಲ್ಲಿ ಏರ್ಪಡಿಸಿರುವ ಎರಡು ದಿನಗಳ ರಾಜ್ಯ ಮಟ್ಟದ 4ನೇ ವೈಜ್ಞಾನಿಕ ಸಮ್ಮೇಳನ ವನ್ನು ಉದ್ಘಾಟಿಸಿ ಮಾತನಾಡಿದ ಅವರು ನಾವಿಂದು ಮಾನವಿಯ ಮೌಲ್ಯಗಳನ್ನು ದೂರ ಮಾಡಿಕೊಳ್ಳುತ್ತಿದ್ದೇವೆ. ಆದರ್ಶ ಗಳಿಂದ ಹೊರ ಬಂದಿದ್ದೇವೆ. ಗೌರವವಿಲ್ಲದೆ ಬದುಕಿನ ಹಾದಿಯಲ್ಲಿ ಸಾಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಅದರಲ್ಲೂ ಪ್ರತಿಯೊಬ್ಬರಲ್ಲಿ ವೈಜ್ಞಾನಿಕ ಚಿಂತನೆ ಮೂಡಿಸುವ ಕೆಲಸ ಆಗಬೇಕು. ಹಿರಿಯರು, ಶಿಕ್ಷಕರು ಮಕ್ಕಳ ಬದುಕಿಗೆ ಆದರ್ಶವನ್ನು ತಿಳಿಸುವ ಮೂಲಕ ಕಂದಚಾರದ ಕಂದಕಕ್ಕೆ ಬೀಳದಂತೆ ನೋಡಿಕೊಳ್ಳ

ಬೇಕಾಗಿದೆ. ಕುವೆಂಪು ಹೇಳಿದಂತೆ ಧರ್ಮ, ಜಾತಿಯಿಂದ ಹೊರಬಂದು ವಿಶ್ವಮಾನವತೆ ಯನ್ನು ಸಾರಬೇಕಾಗಿದೆ. ಇಂದಿಗೂ ಗ್ರಾಮೀಣ ಭಾಗ ದಲ್ಲಿ ಮೌಢ್ಯ ಕಂದಚಾರಗಳು ಬೇರೂರಿವೆ. ಅನೇಕ ಅನಿಷ್ಠ ಪದ್ಧತಿಗಳನ್ನು ನಿರ್ಮೂಲನೆ ಮಾಡುವ ಕೆಲಸ ಆಗಬೇಕಾಗಿದೆ. ಬುದ್ಧ, ಬಸವ, ಅಂಬೇಡ್ಕರರ ಆದರ್ಶ ಗಳನ್ನು ಪ್ರತಿಯೊಬ್ಬರು ಅನುಸರಿಸುವಂತಾಗಬೇಕು. ದುರ್ಬಲ ಮನಸ್ಸು ಗಳನ್ನು ವೈಜ್ಞಾನಿಕ ತಳಹದಿಯಲ್ಲಿ ಗಟ್ಟಿಗೊಳಿಸುವಂತಹ ಕಾರ್ಯಕ್ರಮ ಗಳನ್ನು ವೈಜ್ಞಾನಿಕ ಪರಿಷತ್ತಿನಿಂದ ನಡೆಸುತ್ತಿರುವುದು ಶ್ಲಾಘನಿಯ ಸಂಗತಿ ಎಂದರು.

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಡಾ.ಹುಲಿಕಲ್ ನಟರಾಜ್ ಮಾತನಾಡಿ ಪರಿಷತ್ತಿನ ಧ್ಯೇಯೋದ್ದೇಶಗಳನ್ನು ಜನ ಸಾಮಾನ್ಯರಲ್ಲಿ ತಿಳಿಸುವ ಪ್ರಯತ್ನ ನಿರಂತರವಾಗಿ ನಡೆಯುತ್ತಲೇ ಇದೆ. ಈ ದಿಸೆಯಲ್ಲಿ ರಾಜ್ಯದ ಉದ್ದಗಲ ದಲ್ಲೂ ನಮ್ಮ ಸಂಸ್ಥೆ ಸಕ್ರಿಯವಾಗಿ ಕಾರ್ಯನಿರ್ವ ಹಿಸುತ್ತಿದೆ. ಜನರಲ್ಲಿ ಮೂಢ ನಂಬಿಕೆಗಳ ಬದಲು ಮೂಲ ನಂಬಿಕೆಗಳು ಇರಬೇಕಾಗಿದೆ. ನಾವು ಎಂದಿಗೂ ಧರ್ಮದ ವಿರೋಧಿಗಳಲ್ಲ. ಆದರೆ ಧರ್ಮದ ಹೆಸರಿ ನಲ್ಲಿ ನಡೆಯುವ ಮೂಢನಂಬಿಕೆಗಳನ್ನು ಬಿಂಬಿಸುವ ವರ ವಿರೋಧಿಯಾಗಿದ್ದೇವೆ. ಪರಿಷತ್ತು ನಡೆಸುವ ಕಾರ್ಯಕ್ರಮ ಗಳು ವಿಶೇಷವಾಗಿ ಮಕ್ಕಳ ಕೇಂದ್ರಿತ ವಾಗಿದ್ದು, ಮುಂದಿನ ಜನಾಂಗ ದಾರಿ ತಪ್ಪದಂತೆ ನೋಡಿ ಕೊಳ್ಳುವ ಮಹತ್ತರವಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಆಳಂದ ಶಾಸಕ ಬಿ.ಆರ್.ಪಾಟೀಲ್ ಮಾತನಾಡಿ ಹುಲಿಕಲ್ ನಟರಾಜ್ ಅವರ ನೇತೃತ್ವದಲ್ಲಿ ವೈಜ್ಞಾನಿಕ ಪರಿಷತ್ತು ನಡೆಸುತ್ತಿರುವ ಇಂತಹ ಸಮ್ಮೇಳನಗಳು ಪ್ರಸ್ತುತ ಸಮಾಜಕ್ಕೆ ಅತ್ಯವಶ್ಯಕವಾಗಿದ್ದು, ರಾಜ್ಯದ ಉದ್ದಗಲಕ್ಕೂ ನಡೆಸುವಂತಾಗಬೇಕು. ಮನೆಮನ ಗಳಲ್ಲೂ ವಿಜ್ಞಾನದ ಅರಿವು ಮೂಡಿಸಬೇಕು. ಮೌಢ್ಯದ ಹೆಸರಿ ನಲ್ಲಿ ಕೆಲವರು ಮಕ್ಕಳು ಹಾಗೂ ಮಹಿಳೆಯರ ಮನಸ್ಸುಗಳನ್ನು ಹಾಳು ಮಾಡುತ್ತಿದ್ದಾರೆ, ಇಂತಹ ವಿಷಮ ಮನಸ್ಸುಗಳನ್ನು ತಡೆಯಲು ಇಂತಹ ಕಾರ್ಯಕ್ರಮಗಳ ಅಗತ್ಯವಿದೆ. ಪರಿಷತ್ತು ನಡೆಸುವ ಕಾರ್ಯಕ್ರಮಗಳಿಗೆ ಸರ್ಕಾರದ ವತಿಯಿಂದ ಎಲ್ಲಾ ರೀತಿಯಲ್ಲಿ ಸಹಕಾರ ನೀಡುವಂತೆ ಮಾನ್ಯ ಮುಖ್ಯಮಂತ್ರಿಗಳಿಗೆ ಹಾಗೂ ಸರ್ಕಾರಕ್ಕೆ ಮಾಹಿತಿ ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ವೈಚಾರಿಕತೆ, ಶಿಕ್ಷಣ, ಸಾಹಿತ್ಯ, ಕೃಷಿ, ಸಮಾಜ ಸೇವೆ, ಸಂಘಟನೆ, ನೃತ್ಯ ಕಲೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆ ಮಾಡಿರುವ ಹಲವರಿಗೆ ರಾಜ್ಯಮಟ್ಟದ ಜೀವಮಾನ ಸಾಧನಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇದೇ ವೇಳೆ ವೈಜ್ಞಾನಿಕ ಚಿಂತನೆಗಳನ್ನು ಒಳಗೊಂಡ ಜ್ಞಾನಸಿರಿ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಯಿತು.

ವೈಜ್ಞಾನಿಕ ಸಮ್ಮೇಳನದ ನಿಮಿತ್ತ ರಾಜ್ಯದ ವಿವಿಧ ಶಾಲೆಗಳು, ಡಿ.ಆರ್.ಡಿ.ಓ., ಇಸ್ರೋ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗಳಿಂದ ಏರ್ಪಡಿಸಿದ್ದ ವಿಜ್ಞಾನ ವಸ್ತು ಪ್ರದರ್ಶನ ವಿಶೇಷ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಬೆಂ.ನಗರ ಜಿಲ್ಲಾಧಿಕಾರಿ ಜಿ.ಜಗದೀಶ್, ಬಾಗಲೂರು ಗ್ರಾ.ಪಂ.ಅಧ್ಯಕ್ಷ ಎ.ಕೆಂಪೇಗೌಡ, ಉಪಾಧ್ಯಕ್ಷೆ ರಫಿಯಾ ಸುಲ್ತಾನ್, ಉಪ ನಿರ್ದೇಶಕರಾದ ಡಿ.ಹನುಮಂತ ರಾಯಪ್ಪ, ಬಿಇಓ ಡಿ.ಆರ್. ರಾಮಮೂರ್ತಿ, ಡಾ.ಉಷಾದೇವಿ, ಕೆ.ಜಿ.ರಾವ್, ಶಿವರಂಜನ್ ಸತ್ಯಂಪೇಟೆ, ಮುನಿವೆಂಕಟೇಗೌಡ, ಡಾ.ಶ್ರೀರಾಮಚಂದ್ರ, ಡಾ.ಚಿಕ್ಕಹನುಮಂತೇಗೌಡ, ರವಿ ಬಿಳಿಶಿವಾಲೆ, ಡಾ.ವಿ.ಸುರೇಶ್, ಡಾ.ಬೀರೇಗೌಡ, ವಿ.ಟಿ.ಸ್ವಾಮಿ, ಮಾರೇನಹಳ್ಳಿ ಗ್ರಾ.ಪಂ.ಅಧ್ಯಕ್ಷ ಪಿ.ರಾಹುಲ್, ಬಾಗಲೂರು ಗ್ರಾ.ಪಂ.ಮಾಜಿ ಅಧ್ಯಕ್ಷ ಜಗನ್ನಾಥ್, ಗ್ರಾ.ಪಂ. ಸದಸ್ಯರಾದ ಪ್ರಭುಸ್ವಾಮಿ, ಸೈಯದ್ ಶಬ್ಬೀರ್, ಪಿಳ್ಳೇಗೌಡ, ಧನಂಜಯ ಸೇರಿದಂತೆ ಸುತ್ತಮುತ್ತಲಿನ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಇನ್ನಿತರರಿದ್ದರು.

ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಶೆಟ್ಟಿ ಬಣದ ನೆಲಮಂಗಲ ತಾಲೂಕು ಆಟೋ ಘಟಕದ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ರಾಜ್ಯ ಉಪಾಧ್ಯಕ್ಷ ಉಮೇಶ್ ಗೌಡ, ಯೋಜನಾ ಪ್ರಾಧಿಕಾರಿಯ ಅಧ್ಯಕ್ಷ ನಾರಾಯಣಗೌಡ, ಟಿಎಪಿಎಂಸಿ ಅಧ್ಯಕ್ಷರಾದ ನರಸಿಂಹಮೂರ್ತಿ, ನಗರಾಧ್ಯಕ್ಷ ರಂಗಸ್ವಾಮಿ, ಗೌರವಾಧ್ಯಕ್ಷ ಕುಮಾರ್ ಕೃಷ್ಣ, ಸದಸ್ಯರಾದ ಹನುಮಂತರಾಜು, ಶಶಿಕುಮಾರ್, ಗಂಗಾಧರ, ಸಿದ್ದರಾಜು, ವಿಜಯ್ ಕುಮಾರ್, ತಿಮ್ಮಣ್ಣ, ಮನೋಜ್ ಕುಮಾರ್, ತಿಮ್ಮೇಗೌಡ, ನಾಗರಾಜು, ರಾಮಣ್ಣ, ವೆಂಕಟೇಶ, ಹನುಮಂತಿ, ಆನಂದ್, ಕಿರಣ್ ಇತರರು ಇದ್ದರು.

ಭಾರತ ಸೇವಾದಳ ಸಪ್ತಾಹ ಅಂಗವಾಗಿ ರಾಷ್ಟ್ರೀಯ ಭಾವೈಕ್ಯತೆ ಮಕ್ಕಳ ಮೇಳ

ಉದಯಕಾಲ ನ್ಯೂಸ್ ದೊಡ್ಡಬಳ್ಳಾಪುರ: ವಿದ್ಯಾರ್ಥಿಗಳು ಈಗಿನಿಂದಲೇ ತಮ್ಮ ವಿದ್ಯಾರ್ಥಿ ಜೀವನದಲ್ಲಿ ರಾಷ್ಟ್ರ ಪ್ರೇಮ, ರಾಷ್ಟ್ರಭಕ್ತಿ, ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸಿಕೊಳ್ಳಬೇಕು ಎಂದು ತಾಲೂಕು ದಂಡಾಧಿಕಾರಿ ಶ್ರೀ ವಿದ್ಯಾ ವಿಭಾ ರಾಥೋಡ್ ಹೇಳಿದರು.

ಅವರು ನಗರದ ಅಂಬೇಡ್ಕರ್ ಭವನದಲ್ಲಿ ಭಾರತ ಸೇವಾದಳದ ತಾಲೂಕು ಸಮಿತಿಯಿಂದ ಭಾರತ್ ಸೇವಾ ಸೇವಾದಳದ ಸಪ್ತಾಹದ ಅಂಗವಾಗಿ ರಾಷ್ಟ್ರೀಯ ಭಾವೈಕ್ಯತೆ ಮಕ್ಕಳ ಮೇಳದಲ್ಲಿ ಮಾತನಾಡಿ, ಪ್ರಸ್ತುತ ಕಾಲದಲ್ಲಿ ವಿದ್ಯಾರ್ಥಿಗಳಿಗೆ ಈಗಿನಿಂದಲೇ ರಾಷ್ಟ್ರಪ್ರೇಮ ರಾಷ್ಟ್ರ ಭಕ್ತಿಯನ್ನು ಬೆಳೆಸುವ ಕೆಲಸ ಮುಖ್ಯವಾಗಿ ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸುವಂತಹ ಕೆಲಸ ಆಗಬೇಕು ಮಹಾತ್ಮ ಗಾಂಧೀಜಿ ಅವರು ಕಂಡಂತಹ ಕನಸು ನನಸಾಗಬೇಕು ಇಂತಹ ಕಾರ್ಯಗಳನ್ನು ಭಾರತ ಸೇವಾದಳ ಶಾಲೆಗಳಿಗೆ ಹಮ್ಮಿಕೊಂಡಿರುವುದು ತುಂಬಾ ಸಂತೋಷದ ವಿಷಯ ಎಂದರು.

ಭಾರತ ಸೇವಾದಳದ ಜಿಲ್ಲಾ ಸಮಿತಿ ಅಧ್ಯಕ್ಷ ಲಕ್ಷ್ಮೀ ಪತಿ ಅವರು ಮಾತನಾಡಿ, ತಾಲೂಕಿನಲ್ಲಿರುವ ಎಲ್ಲಾ ಶಾಲೆಯ ಎಲ್ಲಾ ಶಾಖೆಗಳಿಗೆ ಸುಮಾರು 5000 ಸಮವಸ್ತ್ರಗಳನ್ನು ಉಚಿತವಾಗಿ ನೀಡಲಾಗುವುದು ಎಂದರು, ತಾಲೂಕಿನ ಶಾಖಾ ನಾಯಕರಗಳು ವಿದ್ಯಾರ್ಥಿಗಳಲ್ಲಿ ಶಿಸ್ತು ಮೂಡಿಸುವಲ್ಲಿ ಶ್ರಮ ವಹಿಸುತ್ತಿರುವುದು ತುಂಬಾ ಸಂತೋಷ ಎಂದರು.

ಭಾರತೀಯ ಸೇವಾದಳದ ತಾಲೂಕು ಸಮಿತಿಯ ಅಧ್ಯಕ್ಷ ಆರ್. ವಿ ಮಹೇಶ್ ಮಾತನಾಡಿ, ಭಾರತ ಸೇವಾದಳ ಸ್ವಾತಂತ್ರ್ಯಕ್ಕಾಗಿ ಯುವಕರನ್ನು ಸಂಘಟಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದು ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಶಿಸ್ತು ಸಾಮರಸ್ಯ ಮೂಡಿಸುವಲ್ಲಿ ಭಾರತ ಸೇವಾದಳ ಮಹತ್ವದ ಕೆಲಸ ಮಾಡುತ್ತಿದೆ ಎಂದರು.

ಕಾರ್ಯಕ್ರಮಕ್ಕೆ ಮೊದಲು ಸುಮಾರು 300 ವಿದ್ಯಾರ್ಥಿಗಳು ನಗರದ ನೆಲದಾಂಜನೇಯ ಸ್ವಾಮಿ ದೇವಸ್ಥಾನದಿಂದ ಅಂಬೇಡ್ಕರ್ ಭವನದವರೆಗೂ ಪ್ರಭಾತ ಬೇರಿ ಮೂಲಕ ಜಾಥ ನಡೆಸಿದರು.

ಈ ಕಾರ್ಯಕ್ರಮಕ್ಕೆ ಶಾಸಕರಾದ ಧೀರಜ್ ಮುನಿರಾಜು ಹಸಿರು ಬಾವುಟ ತೋರಿಸಿ ಚಾಲನೆ ನೀಡಿದರು.

ಟಿಎಪಿಎಂಸಿ ನಿರ್ದೇಶಕ ರಂಗಪ್ಪ, ತೂಬಗೆರೆ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರವಿ ಸಿದ್ದಪ್ಪ, ಭೂ ಮಂಜೂರಾತಿ ಸಮಿತಿ ಸದಸ್ಯ ಶ್ರೀಧರ್, ಹೊಸಕೋಟೆ ತಾಲೂಕು ಕೃಷಿಕ ಸಮಾಜ ಅಧ್ಯಕ್ಷ ಹರೀಶ್, ದೊಡ್ಡಬಳ್ಳಾಪುರ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ಮುರುಳಿಧರ್, ನಗರಸಭೆ ಸದಸ್ಯ ಕಾಂತರಾಜ್, ಕರ್ನಾಟಕ ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಮಾಜಿ ಸದಸ್ಯ ಸಿ. ರಾಮಕೃಷ್ಣ ಕಾರ್ಯಧ್ಯಕ್ಷ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ, ವಿ.ಸಿ ಜ್ಯೋತಿ ಕುಮಾರ್ , ವಕೀಲ ಆರ್,ವಿ,ಶಿವಕುಮಾರ್ ಹಾಗೂ ತಾಲೂಕ ಸಮಿತಿಯ ನಿರ್ದೇಶಕರು ಮುಂತಾದವರು ಭಾಗವಹಿಸಿದ್ದರು.

ಜ.6 ರಿಂದ 20 ವರೆಗೆ ಯುವನಿಧಿ ವಿಶೇಷ ನೋಂದಣಿ ಅಭಿಯಾನ

ಉದಯಕಾಲ ನ್ಯೂಸ್

ದೇವನಹಳ್ಳಿ: ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆ ಅಡಿಯಲ್ಲಿ 2023 ಹಾಗೂ 24ನೇ ಸಾಲಿನಲ್ಲಿ ತೇರ್ಗಡೆಯಾದ ಪದವಿ ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಅಭ್ಯರ್ಥಿಗಳನ್ನು ಯುವ ನಿಧಿ ಯೋಜನೆ ವ್ಯಾಪ್ತಿಗೆ ತರುವ ಸಂಬಂಧ ಜನವರಿ 6 ರಿಂದ 20 ರವರೆಗೆ ಜಿಲ್ಲೆಯಾದ್ಯಂತ ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಯುವನಿಧಿ ಯೋಜನೆ ಅಡಿಯಲ್ಲಿ ಅರ್ಹ ಅಭ್ಯರ್ಥಿಗಳು ನೋಂದಾಯಿಸಿಕೊಳ್ಳಲು ಕೆಳಕಂಡ ಕಚೇರಿಗಳಲ್ಲಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಯುವನಿಧಿ ಸಹಾಯವಾಣಿ ಮತ್ತು ನೋಂದಣಿ ಕೇಂದ್ರಗಳನ್ನು ತೆರೆಯಲಾಗಿರುತ್ತದೆ.

ಜಿಲ್ಲಾ ಕೌಶಲ್ಯ ಅಭಿವೃದ್ಧಿ ಕಚೇರಿ ಜಿಲ್ಲಾಡಳಿತ ಭವನ ಕೊಠಡಿ ಸಂಖ್ಯೆ 123, ಬೀರಸಂದ್ರ, ದೇವನಹಳ್ಳಿ ತಾಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ತಾಲೂಕು ಪಂಚಾಯಿತಿ ಕಚೇರಿ ದೇವನಹಳ್ಳಿ,ದೊಡ್ಡಬಳ್ಳಾಪುರ ಹೊಸಕೋಟೆ,ನೆಲಮಂಗಲ. ನಗರಸಭೆ ದೊಡ್ಡಬಳ್ಳಾಪುರ,ಹೊಸಕೋಟೆ ನೆಲಮಂಗಲ. ಪುರಸಭೆ ದೇವನಹಳ್ಳಿ, ವಿಜಯಪುರ. ಪಟ್ಟಣ ಪಂಚಾಯಿತಿ ಬಾಶೆಟ್ಟಿಹಳ್ಳಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದೇವನಹಳ್ಳಿ, ದೊಡ್ಡಬಳ್ಳಾಪುರ, ಸೂಲಿಬೆಲೆ, ಹೊಸಕೋಟೆ, ತ್ಯಾಮಗೊಂಡ್ಲು ನೆಲಮಂಗಲ.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ದೊಡ್ಡಬಳ್ಳಾಪುರ.

ಅಭ್ಯರ್ಥಿಗಳು ಮೇಲೆ ತಿಳಿಸಿದ ನೋಂದಣಿ ಕೇಂದ್ರಗಳಲ್ಲಿ ಅಥವಾ www.sevasindhugs.karnataka.gov.in ನೋಂದಾಯಿಸ ಬಹುದಾಗಿದೆ. 2024ನೇ ಸಾಲಿನ ಪದವಿ ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮಾದಲ್ಲಿ ತೇರ್ಗಡೆ ಹೊಂದಿ 180 ದಿನಗಳೊಳಗೆ ಇರುವ ಅಭ್ಯರ್ಥಿಗಳು ಕೂಡ ಅರ್ಜಿ ಸಲ್ಲಿಸಬಹುದು. ಆದರೆ ಈ ಅಭ್ಯರ್ಥಿಗಳು 180 ದಿನಗಳ ನಂತರ ಯೋಜನೆಯ ಪ್ರಯೋಜನ ಪಡೆಯಲು ಅರ್ಹರಾಗುತ್ತಾರೆ. ಯೋಜನೆಯ ಅರ್ಹ ಅಭ್ಯರ್ಥಿಗಳು ನಿರುದ್ಯೋಗ ಭತ್ಯೆಯನ್ನು ಪಡೆಯಲು ಪ್ರತಿ ತಿಂಗಳ 01 ರಿಂದ 25ನೇ ತಾರೀಕಿನೊಳಗೆ ಘೋಷಣೆಯನ್ನು ಆನ್ಲೈನಲ್ಲಿ ದಾಖಲು ಮಾಡುವುದು ಕಡ್ಡಾಯವಾಗಿರುತ್ತದೆ. ಯೋಜನೆ ಕುರಿತಾದ ಹೆಚ್ಚಿನ ಮಾಹಿತಿಯನ್ನು ಮೇಲೆ ತಿಳಿಸಲಾದ ಅಂತ ಜಾಲತಾಣದಿಂದ ಅಥವಾ ಸಹಾಯಮಾಣಿ ಸಂಖ್ಯೆ 1800-599-7154 ಯಿಂದ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಡಾ? ಎನ್..ಶಿವಶಂಕರ್ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಣ ಅಧಿಕಾರಿ ಕೆ ಎನ್ ಅನುರಾಧ ಉಪ ಕಾರ್ಯದರ್ಶಿ ಕೆ ಟಿ ರಮೇಶ್ ಕಾರ್ಯ ನಿರ್ವಾಹಣ ಅಧಿಕಾರಿಗಳಾದ ಸಿ ಎಸ್ ಶ್ರೀನಾಥ್ ಗೌಡ ಮುನಿರಾಜು ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಇದ್ದರು.

ಚಿನ್ನ ಕಳವು ಮಾಡಿದ್ದ ಆರೋಪಿ ಬಂಧನ

ಉದಯಕಾಲ ನ್ಯೂಸ್ ದೇವನಹಳ್ಳಿ: ಚಿನ್ನವನ್ನು ಕಳ್ಳತನ ಮಾಡಿದ್ದ ಆರೋಪಿಯನ್ನು ಬಂಧಿಸಿ ಚಿನ್ನವನ್ನು ವಶಕ್ಕೆ ವಿಶ್ವನಾಥಪುರ ಪೊಲೀಸರು ಪಡೆದಿದ್ದಾರೆ..

ದೇವನಹಳ್ಳಿ ತಾಲೂಕಿನ ವಿಶ್ವನಾಥಪುರ ಪೊಲೀಸ್ ಠಾಣೆ ವ್ಯಾಪ್ತಿಯ ದುದ್ದನಹಳ್ಳಿ ಗ್ರಾಮದ ಮನೆಯೊಂದರಲ್ಲಿ ಚಿನ್ನಾಭರಣ ಕಳ್ಳತನ ಪ್ರಕರಣದ ಸಂಬಂಧ ವಿಶ್ವನಾಥಪುರ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಚಿನ್ನಾಭರಣ ಕಳವು ಮಾಡುತ್ತಿದ್ದ ವಿವೇಕ್ ಎಚ್.ಎಂ. ಬಂಧಿತ. ಕೋಲಾರ ಜಿಲ್ಲೆಯ ಮಾಲೂರು ತಾಲೂಕು ಹುಂಗೆನಹಳ್ಳಿ ಗ್ರಾಮದ ಈತ ವಿಶ್ವನಾಥಪುರ, ಹೊಸಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ದುದ್ದನಹಳ್ಳಿ, ಕಲ್ಲಹಳ್ಳಿ ಗ್ರಾಮದಲ್ಲಿ ಕಳ್ಳತನ ಮಾಡಿದ್ದ 108 ಗ್ರಾಂ. ತೂಕದ ಚಿನ್ನದ ಒಡವೆಗಳನ್ನು ವಶಕ್ಕೆ ಪಡೆಯಲಾಗಿದೆ. ಹಿರಿಯ ಪೊಲೀಸ್ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪೊಲೀಸ್ ಇನ್‌ಸ್ಪೆಕ್ಟರ್ ಟಿ.ಶ್ರೀನಿವಾಸ್ ನೇತೃತ್ವದಲ್ಲಿ ಪಿಎಸ್‌ಐ ನಾರಾಯಣಸ್ವಾಮಿ, ಎಎಸ್‌ಐ ಹರೀಶ್, ಹೆಡ್‌ಕಾನ್ಸ್‌ಟೆಬಲ್ ಸಿದ್ದಪ್ಪ ಹಾಗೂ ಸಿಬ್ಬಂದಿ ಶಂಭುಲಿಂಗ, ಸಂತೋಷ್, ಅಶೋಕ.ಜಿ.ಕೆ., ಸುದೀರ್, ಪುಂಡಲೀಕ್. ಚಾಲಕ ಉಮೇಶ್ ತಂಡ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಜ.5ಕ್ಕೆ ಶ್ರೀ ವಾಲ್ಮೀಕಿ ಜನಕಲ್ಯಾಣ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಉದ್ಘಾಟನೆ

ಉದಯಕಾಲ ನ್ಯೂಸ್ ಕೆ.ಆರ್.ಪುರ: ಶ್ರೀ ವಾಲ್ಮೀಕಿ ಜನಕಲ್ಯಾಣ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯ ಉದ್ಘಾಟನಾ ಸಮಾರಂಭ ಜ.5ರಂದು ಕೆ.ಆರ್.ಪುರದ ಎಂಟಿಬಿ ಶುಭಾಮೇರು ಕಲ್ಯಾಣ ಮಂಟಪದಲ್ಲಿ ನಡೆಯಲಿದೆ ಎಂದು ಸೊಸೈಟಿ ಅಧ್ಯಕ್ಷ ಬಾಕ್ಸರ್ ಎನ್. ನಾಗರಾಜ್ ತಿಳಿಸಿದರು.

ಸೊಸೈಟಿಯನ್ನು ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಅಧ್ಯಕ್ಷ ಪ್ರಸನ್ನಾನಂದಪುರಿ ಸ್ವಾಮಿ ಅವರು ಉದ್ಘಾಟಿಸಲಿದ್ದು, ಈಶ್ವರಾನಂದ ಸ್ವಾಮೀಜಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಚಿವರಾದ ರಾಜಣ್ಣ , ಸತೀಶ್ ಜಾರಕಿಹೊಳಿ, ಪರಿಶಿಷ್ಟ ಜ